# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2273 |
| ಸದಸ್ಯರ ಹೆಸರು | : | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21.03.2022. |
| ಉತ್ತರಿಸುವವರು | : | ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಕಾಡಾನೆ, ಹುಲಿ ಸೇರಿದಂತೆ ವನ್ಯಜೀವಿಗಳ ಉಪಟಳ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಇದರ ಶಾಶ್ವತ ನಿಯಂತ್ರಣಕ್ಕೆ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೊಡಗು ಜಿಲ್ಲೆಯಲ್ಲಿ ಮಾನವ-ಆನೆ ಸಂಘರ್ಷ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಅರಣ್ಯ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿದೆ:- |
| ಇ) | ಯಾವ ರೀತಿಯ ವೈಜ್ಞಾನಿಕ ಹಾಗೂ ನಿರ್ಧಿಷ್ಟವಾದ ಕ್ರಮಗಳನ್ನು ಸರ್ಕಾರ ಅಳವಡಿಸಿಕೊಳ್ಳುವ ಮೂಲಕ ವನ್ಯಜೀವಿ ಮಾನವ ಸಂಘರ್ಷವನ್ನು ನಿಯಂತ್ರಿಸಲಾಗಿದೆ. (ವಿವರಗಳನ್ನು ನೀಡುವುದು) | 1. ಕಾಡಾನೆ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಈವರೆಗೆ 9.51 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿನಲ್ಲಿ 10.00 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.<br>2. ಅರಣ್ಯದಂಚಿನ ಗ್ರಾಮಗಳಲ್ಲಿ ಆನೆಗಳು ಕಾಡಿನಿಂದ ನಾಡಿಗೆ ಬಾರದಂತೆ ಈವರೆಗೆ 50.00 ಕಿ.ಮೀ. ಸೋಲಾರ್ ತಂತಿಬೇಲಿ ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿನಲ್ಲಿ 51.37 ಕಿ.ಮೀ. ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.<br>3. ಅರಣ್ಯದಂಚಿನ ಗ್ರಾಮಗಳಲ್ಲಿ ಆನೆಗಳು ಕಾಡಿನಿಂದ ನಾಡಿಗೆ ಬಾರದಂತೆ ಈವರೆಗೆ 96.00 ಕಿ.ಮೀ. ಆನೆ ತಡೆ ಕಂದಕ ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿಗೆ 45.41 ಕಿ.ಮೀ. ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.<br>4. ಅರಣ್ಯದಂಚಿನ ಗ್ರಾಮಗಳಲ್ಲಿ ರೈತರಿಗೆ ಸೋಲಾರ್ ಬೇಲಿ ನಿರ್ಮಾಣವನ್ನು ಕೈಗೊಳ್ಳಲು ಅರಣ್ಯ ಇಲಾಖೆಯಿಂದ ಶೇಕಡ 50ರಷ್ಟು ಸಹಾಯಧನ ನೀಡಲಾಗುತ್ತಿದ್ದು ಈವರೆಗೆ 21.51 ಕಿ.ಮೀ. ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿನಲ್ಲಿ 15.75 ಕಿ.ಮೀ. ನಿರ್ಮಾಣ ' ಕಾಮಗಾರಿ ಪ್ರಗತಿಯಲ್ಲಿದೆ.<br>5. ಕೊಡಗು ಜಿಲ್ಲೆಯಲ್ಲಿ ಅರಣ್ಯ ಸುತ್ತಮುತ್ತ ಕಾಡಾನೆ/ ವನ್ಯಪ್ರಾಣಿ ಹಾವಳಿ ಉಂಟಾದ ಸಂದರ್ಭಗಳಲ್ಲಿ ತುರ್ತಾಗಿ ಪರಿಸ್ಥಿತಿ ನಿಭಾಯಿಸಲು 12 ಕ್ಷಿಪ್ರ ಸ್ಪಂದನಾ ತಂಡಗಳನ್ನು ರಚಿಸಿ ಕಾರ್ಯ ನಿರ್ವಹಿಸಲಾಗುತ್ತಿದೆ. |

.....2

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | 6. ವನ್ಯಪ್ರಾಣಿಗಳು ಅರಣ್ಯ ಪ್ರದೇಶದಿಂದ ಸಾರ್ವಜನಿಕರ ವಸಹಾತುಗಳಿಗೆ ನುಗ್ಗಿ ಹಾವಳಿ ನಡೆಸುವುದನ್ನು ನಿಯಂತ್ರಿಸಲು 21 ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾರ್ಯ ನಿರ್ವಹಿಸಲಾಗುತ್ತಿದೆ.<br><br>7. ಅರಣ್ಯ ಸಂಪತ್ತು ಮತ್ತು ವನ್ಯಜೀವಿ ಸಂರಕ್ಷಣಾ ಕಾರ್ಯಗಳು ಮುಖ್ಯವಾಗಿ ವನ್ಯಜೀವಿ ಸಂಕುಲಗಳನ್ನು ಬೇಟೆಗಾರರಿಂದ ರಕ್ಷಿಸಿ ನಿರ್ವಹಿಸುವ ಕೆಲಸಗಳಿಗಾಗಿ 78 ಕಳ್ಳ ಬೇಟೆ ತಡೆ ಶಿಬಿರಗಳನ್ನು ಅತ್ಯಂತ ಸೂಕ್ಷ್ಮ ಪ್ರದೇಶಗಳಲ್ಲಿ ಸ್ಥಾಪಿಸಿ ನಿರ್ವಹಿಸಲಾಗುತ್ತಿದೆ.<br><br>8. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ.<br><br>9. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br><br>10. ಕಾಡಾನೆಗಳ ಚಲನ ವಲನ ಕುರಿತು ಮಾಹಿತಿ ನೀಡುವ Early Warning System ತಂತ್ರಾಂಶವನ್ನು ರೂಪಿಸಲಾಗಿದೆ.<br><br>11. ವನ್ಯಪ್ರಾಣಿಗಳ ದಾಳಿಯಿಂದ ಭಾದಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ.<br><br>12. ಕೊಡಗು ಜಿಲ್ಲೆಯಲ್ಲಿ 2014ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿರುತ್ತದೆ.<br><br>13. ಕೊಡಗು ಜಿಲ್ಲೆಯಲ್ಲಿ 9 ಆನೆಗಳಿಗೆ ರೇಡಿಯೋ ಕಾಲರ್ ಗಳನ್ನು ಅಳವಡಿಸಿ ಅವುಗಳ ಚಲನವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.<br><br>14. ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. |

......3

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | 15. ಹುಲಿ ಹಾವಳಿ ಕಂಡುಬಂದಂತಹ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅರಿವು ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡಲಾಗುತ್ತಿದೆ ಹಾಗೂ ಹಾವಳಿ ತಡೆಗಟ್ಟಲು 3-4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ಹಗಲು-ರಾತ್ರಿ ಗಸ್ತು ಮಾಡಲು ಮತ್ತು ಹುಲಿ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ಧತೆ ಮಾಡಿಕೊಂಡು, ಅವಶ್ಯವಿದ್ದಲ್ಲಿ ಸೆರೆಹಿಡಿದು ಸೂಕ್ತವಾದ ಆವಾಸ ಸ್ಥಾನಕ್ಕೆ ಬಿಡಲಾಗುತ್ತಿದೆ.<br><br>16. ಚಿರತೆ ಹಾವಳಿ ಕಂಡುಬಂದಂತಹ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅರಿವು ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡಲಾಗುತ್ತಿದೆ ಹಾಗೂ ಹಾವಳಿ ತಡೆಗಟ್ಟಲು 3-4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ಹಗಲು-ರಾತ್ರಿ ಗಸ್ತು ಮಾಡಲು ಮತ್ತು ಚಿರತೆ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ಧತೆ ಮಾಡಿಕೊಂಡು, ಅವಶ್ಯವಿದ್ದಲ್ಲಿ ಸೆರೆಹಿಡಿದು ಸೂಕ್ತವಾದ ಆವಾಸ ಸ್ಥಾನಕ್ಕೆ ಬಿಡಲಾಗುತ್ತಿದೆ. |
| ಈ) | ವೈಜ್ಞಾನಿಕ ಹಾಗೂ ಸೂಕ್ತ ರೀತಿಯ ನಿಯಂತ್ರಣ ಕ್ರಮಗಳನ್ನು ತೆಗೆದುಕೊಂಡಿದ್ದಲ್ಲಿ, ಜಿಲ್ಲೆಯಲ್ಲಿ ಇತ್ತೀಚಿನ ವರ್ಷಗಳಲ್ಲಿ ವನ್ಯಜೀವಿ-ಮಾನವ ಸಂಘರ್ಷ ಪ್ರಕರಣಗಳು ಕಡಿಮೆಯಾಗಿವೆಯೇ? (ಸಂಪೂರ್ಣ ವಿವರ ನೀಡುವುದು) | ವನ್ಯಜೀವಿ-ಮಾನವ ಸಂಘರ್ಷ ನಿಯಂತ್ರಣಕ್ಕೆ ಮೇಲಿನಂತ ಕ್ರಮ ತೆಗೆದುಕೊಳ್ಳಲಾಗಿರುತ್ತದೆ. ಆದಾಗ್ಯೂ ಮೂರು ವರ್ಷಗಳಲ್ಲಿ ಸಂಭವಿಸಿದ ವನ್ಯಪ್ರಾಣಿಗಳಿಂದ ಉಂಟಾದ ಹಾನಿ ಪ್ರಕರಣಗಳಿಗೆ ಪಾವತಿಸಿದ ದಯಾತ್ಮಕ ಧನದ ವಿವರಗಳನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ. |

ಸಂಖ್ಯೆ: ಅಪಜೀ 64 ಎಫ್ ಡಬ್ಲ್ಯೂಎಲ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

# ಅನುಬಂಧ

ವನ್ಯಪ್ರಾಣಿ ಹಾವಳಿಯಿಂದ ಬೆಳೆಹಾನಿ ಮತ್ತು ಇತರೆ ಪ್ರಕರಣಗಳಿಗೆ ದಯಾತ್ಮಕ ಪರಿಹಾರ ಪಾವತಿಸಿರುವ ವಿವರದ ತಖ್ತೆ (15.02.2022ರ ಅಂತ್ಯಕ್ಕೆ) (ಮೊತ್ತ ರೂ.ಲಕ್ಷಗಳಲ್ಲಿ)

| ವಿಭಾಗ | ಬಿಡುಗಡೆಯಾದ ಅನುದಾನ ರೂ.ಲಕ್ಷಗಳಲ್ಲಿ | ಕೃಷಿ ನಷ್ಟ | | ಸಾಕು ಪ್ರಾಣಿ ನಷ್ಟ | | ಮಾನವ ಪ್ರಾಣ ಹಾನಿ | | ಮಾನವ ಗಾಯ | | ಮಾಶಾಸನ | | ಆಸ್ತಿ ನಷ್ಟ | | ಒಟ್ಟು | |
|---|---|---|---|---|---|---|---|---|---|---|---|---|---|---|---|
| | | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ |
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 |
| **2019-20** | | | | | | | | | | | | | | | |
| ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ಹುಣಸೂರು | 65.00 | 894 | 50.98 | 110 | 8.65 | - | - | 7 | 2.8510 | - | - | 37 | 2.282 | 1048 | 64.76 |
| ಮಡಿಕೇರಿ ವಿಭಾಗ | 77.00 | 1259 | 73.03 | 7 | 0.64 | 1 | 0 | 4 | 1.8100 | 0 | 0 | 0 | 0.000 | 1271 | 75.48 |
| ವೀರಾಜಪೇಟೆ ವಿಭಾಗ | 93.00 | 1246 | 84.61 | 16 | 1.52 | 1 | 0 | 7 | 1.9150 | 0 | 0 | 2 | 0.180 | 1272 | 88.23 |
| ವನ್ಯಜೀವಿ ವಿಭಾಗ, ಮಡಿಕೇರಿ | 61.00 | 744 | 43.94 | 27 | 2.7 | 2 | 10.00 | 2 | 0.6300 | 0 | 0 | 39 | 3.730 | 814 | 61.00 |
| ಒಟ್ಟು | 296.00 | 4143 | 252.56 | 160 | 13.51 | 4 | 10.00 | 20 | 7.2060 | 0 | 0 | 78 | 6.192 | 4405 | 289.47 |
| **2020-21** | | | | | | | | | | | | | | | |
| ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ಹುಣಸೂರು | 105.48 | 1314 | 71.71 | 46 | 0.00 | 2 | 0.00 | 6 | 1.4500 | - | - | 44 | 32.320 | 1412 | 105.48 |
| ಮಡಿಕೇರಿ ವಿಭಾಗ | 103.00 | 1428 | 96.44 | 5 | 0.44 | 3 | 0 | 3 | 5.3100 | 0 | 0 | 0 | 0.000 | 1439 | 102.19 |
| ವೀರಾಜಪೇಟೆ ವಿಭಾಗ | 97.18 | 1430 | 94.05 | 1 | 0.10 | 3 | 0 | 2 | 2.4400 | 0 | 0 | 4 | 0.580 | 1440 | 97.17 |
| ವನ್ಯಜೀವಿ ವಿಭಾಗ, ಮಡಿಕೇರಿ | 52.00 | 797 | 48.30 | 3 | 0.30 | 0 | 0 | 0 | 0.0000 | 0 | 0 | 34 | 3.400 | 834 | 52.00 |
| ಒಟ್ಟು | 357.66 | 4969 | 310.50 | 55 | 0.84 | 8 | 0.00 | 11 | 9.2000 | 0 | 0 | 82 | 36.300 | 5125 | 356.84 |
| **2021-22** | | | | | | | | | | | | | | | |
| ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ಹುಣಸೂರು | 97.00 | 884 | 49.880 | 62 | 8.98 | 5 | 29.50 | 3 | 0.74 | 7 | 1.36 | 106 | 6.53 | 1067 | 96.99 |
| ಮಡಿಕೇರಿ ವಿಭಾಗ | 120.50 | 1487 | 97.52 | 12 | 2.75 | 3 | 22.50 | 1 | 1.53 | 3 | 0.24 | 4 | 0.40 | 1510 | 124.94 |
| ವೀರಾಜಪೇಟೆ ವಿಭಾಗ | 143.38 | 1520 | 82.09 | 12 | 2.9 | 2 | 15.00 | 10 | 2.50 | 4 | 0.46 | 16 | 1.80 | 1564 | 141.90 |
| ವನ್ಯಜೀವಿ ವಿಭಾಗ, | 37.42 | 586 | 33.97 | 5 | 1.45 | 0 | 0 | 0 | 0 | 0 | 0 | 20 | 2.00 | 611 | 37.42 |
| ಒಟ್ಟು | 398.30 | 4477 | 263.46 | 91 | 16.08 | 10 | 67.00 | 14 | 4.77 | 14 | 2.06 | 146 | 10.73 | 4752 | 401.25 |

17/3/22

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,
(ವನ್ಯಜೀವಿ) ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರು,
ಕರ್ನಾಟಕ, ಬೆಂಗಳೂರು.